# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:19ನೇ ಡಿಸೆಂಬರ್, 2024**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಿ.ಟಿ. ರವಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 52(407)<br>5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 73(661) | ಮಾನ್ಯ ಮುಖ್ಯಮಂತ್ರಿಗಳು |
| 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 47(449)<br>4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಹೆಚ್. ಪೂಜಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 49(436)<br>4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಧು ಜಿ. ಮಾದೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 51(551)<br>4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಶ್ರೀ ಹೆಚ್.ಎಸ್. ಗೋಪಿನಾಥ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 57(515+495)<br>7ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಧು ಜಿ. ಮಾದೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 102(962) | ಮಾನ್ಯ ಉಪ ಮುಖ್ಯಮಂತ್ರಿಗಳು |
| 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ: ತಳವಾರ್ ಸಾಬಣ್ಣ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 75(594) | ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಕಾರ್ಯದರ್ಶಿಯವರು:**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024ನ್ನು ಸಭೆಯ ಮುಂದಿಡುವುದು.

## 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ಬಿ.ಎಸ್. ಸುರೇಶ್ (ಮಾನ್ಯ ನಗರಾಭಿವೃದ್ಧಿ ಸಚಿವರು)**
ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಮಕ್ಕಳ ಹಕ್ಕುಗಳ ಬಗ್ಗೆ ಮುಂದುವರೆದ ವಿಶೇಷ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

ಮಕ್ಕಳಲ್ಲಿ ಪೌಷ್ಠಿಕಾಂಶ ಕೊರತೆ, ಶಿಕ್ಷಣ ಮತ್ತು ಹದಿ ಹರೆಯದ ಮಕ್ಕಳು ಅನುಭವಿಸುತ್ತಿರುವ ಸವಾಲುಗಳು ಹಾಗೂ ಪರಿಹಾರೋಪಾಯಗಳ ಕುರಿತು

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ರಾಮೋಜಿಗೌಡ ಮತ್ತು ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ನಿರ್ವಹಣೆಗೆ ಅನುದಾನ ಬಿಡುಗಡೆಯಾಗುತ್ತಿದ್ದರೂ ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶೌಚಾಲಯಗಳ ನಿರ್ವಹಣೆ ಮಾಡಿಸುತ್ತಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

02. **ಶ್ರೀ ಚಿದಾನಂದ ಎಂ. ಗೌಡ ಮತ್ತು ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದವರು(ರಾಯಚೂರು) ಉಚ್ಛ ನ್ಯಾಯಾಲಯ ಹಾಗೂ ಸರ್ಕಾರದ ಆದೇಶಗಳ ಅಡಿಯಲ್ಲಿ ರದ್ದುಪಡಿಸಿರುವ ಪದವಿಯ ಮೂಲ ಅಂಕಪಟ್ಟಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕಲ್ಯಾಣ ಕರ್ನಾಟಕ ವೃಂದದ ನೇಮಕಾತಿ ಪ್ರಕ್ರಿಯೆಯಲ್ಲಿ ಪರಿಗಣಿಸಿ ಲಿಖಿತ ಪರೀಕ್ಷೆಗೆ ಅವಕಾಶ ಕಲ್ಪಿಸಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು

03. **ಶ್ರೀಮತಿ ಹೇಮಲತಾ ನಾಯಕ್** ಅವರು ಮಾದಿಗ ದಾಸರಿ ಸಮುದಾಯವನ್ನು ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ನೋಂದಾಯಿಸದೇ ಇರುವುದರಿಂದ ಸರ್ಕಾರದ ಸೌಲಭ್ಯಗಳಿಂದ ವಂಚಿತವಾಗಿರುವ ಈ ಸಮುದಾಯವನ್ನು ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ನೋಂದಾಯಿಸುವ ಸಲುವಾಗಿ ರಾಜ್ಯ ಸರ್ಕಾರದ ವತಿಯಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦೪. **ಶ್ರೀ ಸುನೀಲ್‌ಗೌಡ ಪಾಟೀಲ್** ಅವರು ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು, ನಗರ ಸಭೆಗಳು, ಪುರ ಸಭೆಗಳು ಹಾಗೂ ಪಟ್ಟಣ್ಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬಹಳ ವರ್ಷಗಳಿಂದ ಆಸ್ತಿ ತೆರಿಗೆ ಪಾವತಿಸದಿರುವವರಿಗೆ ವಿಧಿಸಲಾಗುತ್ತಿರುವ ಬಡ್ಡಿ ಹಾಗೂ ಆಸ್ತಿ ತೆರಿಗೆಯಿಂದ ತೀವ್ರ ಆರ್ಥಿಕ ಹೊರೆಯಾಗಿರುವ ತೆರಿಗೆದಾರರಿಗೆ ಒಂದು ಬಾರಿ ಪರಿಹಾರ(OTS) ಯೋಜನೆಯನ್ನು ಜಾರಿಗೊಳಿಸುವ ಕುರಿತು ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಗಮನ ಸೆಳೆಯುವುದು.

೦೫. **ಶ್ರೀಯುತರುಗಳಾದ ತಿಪ್ಪಣ್ಣಪ್ಪ ಕಮಕನೂರ, ಡಾ: ಡಿ. ತಿಮ್ಮಯ್ಯ, ಹೆಚ್.ಪಿ. ಸುಧಾಮ್ ದಾಸ್ ಹಾಗೂ ಇತರರು** ವಿಧಾನಸೌಧದ ಮುಂದೆ ವಿಶ್ವಗುರು ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಸ್ಥಾಪನೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦೬. **ಶ್ರೀ ಸಿ.ಟಿ. ರವಿ** ಅವರು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸ್ಥಳ ನಿರೀಕ್ಷಣೆಯಲ್ಲಿರುವ ಅಧಿಕಾರಿ ಮತ್ತು ನೌಕರರಿಗೆ ತಕ್ಷಣ ಸ್ಥಳ ನಿಯುಕ್ತಿಗೊಳಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

೦೭. **ಶ್ರೀ ಮಧು ಜಿ. ಮಾದೇಗೌಡ** ಅವರು ಮಂಡ್ಯ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಮೇಲುಕೋಟೆಯಲ್ಲಿ ಮೂಲಸೌಲಭ್ಯವನ್ನು ಕಲ್ಪಿಸುವ ಹಾಗೂ ಅನ್ನದಾಸೋಹ ಆರಂಭಿಸುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

೦೮. **ಶ್ರೀಯುತರುಗಳಾದ ಎಸ್. ರವಿ, ಉಮಾಶ್ರೀ, ಮಂಜುನಾಥ್ ಭಂಡಾರಿ, ಎಂ. ನಾಗರಾಜು, ಹೆಚ್.ಪಿ. ಸುಧಾಮ್ ದಾಸ್ ಹಾಗೂ ಇತರರು** ಸಮಾಜ ಘಾತಕ ವ್ಯಕ್ತಿಗಳು ಹೆಚ್‌ಐವಿ ಪೀಡಿತರ ರಕ್ತವನ್ನು ಆರೋಗ್ಯವಂತರಿಗೆ ಹನಿಟ್ರ್ಯಾಪ್ ಪ್ರಕರಣಗಳಲ್ಲಿ ಇಂಜೆಕ್ಟ್ ಮಾಡುವ ಮೂಲಕ ಹೆಚ್‌ಐವಿ ಸೋಂಕನ್ನು ಪ್ರತಿಷ್ಠಿತ ವ್ಯಕ್ತಿಗಳಿಗೆ ಹರಡಿಸಿ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುತ್ತಿರುವ ಕೃತ್ಯವು ಸಾರ್ವಜನಿಕರನ್ನು ಆತಂಕಕ್ಕೀಡು ಮಾಡುತ್ತಿರುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

೦೧. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ, ಕೆ.ಎ. ತಿಪ್ಪೇಸ್ವಾಮಿ, ಸಿ.ಎನ್. ಮಂಜೇಗೌಡ ಹಾಗೂ ಟಿ.ಎನ್. ಜವರಾಯಿಗೌಡ** ಅವರುಗಳು ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತ್ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳ ಮೀಸಲಾತಿಯನ್ನು ಪ್ರಕಟಿಸಿ ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಆದ್ಯತೆ ಮೇಲೆ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಯ ಚುನಾವಣೆಯನ್ನು ನಡೆಸುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಶರಣಗೌಡ ಬಯ್ಯಾಪುರ, ಸುನೀಲ್‌ಗೌಡ ಪಾಟೀಲ್ ರಾಜೇಂದ್ರ ರಾಜಣ್ಣ ಹಾಗೂ ಚನ್ನರಾಜ್ ಬಸವರಾಜ್ ಹಟ್ಟಿಹೊಳಿ** ಅವರುಗಳು ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು ಗ್ರಾಮ ಪಂಚಾಯತಿಗಳು ಗ್ರಾಮ ಸರ್ಕಾರಗಳಾಗಿ, ತಾಲ್ಲೂಕು ಪಂಚಾಯತಿಗಳು ತಾಲ್ಲೂಕು ಸರ್ಕಾರಗಳಾಗಿ, ಜಿಲ್ಲಾ ಪಂಚಾಯತಿಗಳು ಜಿಲ್ಲಾ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಎಲ್ಲಾ ಹಣಕಾಸು ಮತ್ತು ಅಧಿಕಾರಗಳನ್ನು ಹಸ್ತಾಂತರಗೊಳಿಸಲು ಅವಕಾಶ ಕಲ್ಪಿಸಿರುವ ಪಂಚಾಯತ್ ರಾಜ್ ಕಾನೂನನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಬೆಳಗಾವಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕಟ್ಟಡ ಕಾಮಗಾರಿಗಳು ಪೂರ್ಣಗೊಂಡು ಅಗತ್ಯ ತುರ್ತು ಉಪಕರಣಗಳು ಪೂರೈಕೆಯಾಗಿ ಕೆಲವು ವೈದ್ಯ ಮತ್ತು ಸಿಬ್ಬಂದಿ ಹುದ್ದೆಗಳ ಮಂಜೂರಾತಿ ದೊರೆತಿದ್ದರೂ ಸಹ ಆಸ್ಪತ್ರೆ ಕಾರ್ಯಾರಂಭ ಮಾಡದಿರುವ ಕುರಿತು ಪ್ರಸ್ತಾಪಿಸುವುದು.

## 08. ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ನಡೆದ ವಿಶೇಷ ಚರ್ಚೆಗೆ ಸರ್ಕಾರದಿಂದ ಉತ್ತರ

## 09. ಅರ್ಧ ಗಂಟೆ ಕಾಲಾವಧಿ ಚರ್ಚೆ

೦೧. ಅತಿಥಿ ಶಿಕ್ಷಕರ/ಉಪನ್ಯಾಸಕರ ವೇತನ ಪರಿಷ್ಕರಣೆ ಮಾಡುವ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:02(66)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಡಾ: ಧನಂಜಯ ಸರ್ಜಿ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

೦೨. ಬೆಂಗಳೂರು ಮೆಡಿಕಲ್ ಕಾಲೇಜಿನ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಶುಲ್ಕ ಹೆಚ್ಚಿಸಿರುವುದರ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:07(74)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಶರವಣ ಟಿ.ಎ.** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

೦೩. ಆಕ್ಸಿಜನ್ ಪ್ಲಾಂಟ್ ವೆಂಟಿಲೇಟರ್‌ಗಳನ್ನು ಹೆಚ್ಚಿಸುವ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:14(115)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಡಾ: ಯತೀಂದ್ರ ಎಸ್.** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

೦೪. ಕೊಪ್ಪಳ ಜಿಲ್ಲೆಯಲ್ಲಿ ವಾಸಿಸುವ ದೇವದಾಸಿ ಮಹಿಳೆಯರ ಕುರಿತು ದಿನಾಂಕ:13.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:70(644)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ಹೇಮಲತಾ ನಾಯಕ್** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

೦೫. ಕೆ.ಐ.ಎ.ಡಿ.ಬಿ ವತಿಯಿಂದ ಸಿ.ಎ. ನಿವೇಶನಗಳ ಹಂಚಿಕೆಯಲ್ಲಿನ ಅಕ್ರಮದ ಕುರಿತು ದಿನಾಂಕ:17.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:91(906)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಸಿ.ಟಿ. ರವಿ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**